# ಅನುರಣಿಸಿದ ಹಾಡುಗಳು

**ಧಾರವಾಡ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತದ ಸಹಯೋಗದಲ್ಲಿ ನಗರದ ಕರ್ನಾಟಕ ಕಾಲೇಜಿನ ಆವರಣದಲ್ಲಿ ಹಮ್ಮಿಕೊಂಡಿದ್ದ 'ಮಾತಾಡ್ ಮಾತಾಡ್ ಕನ್ನಡ; ಕನ್ನಡಕ್ಕಾಗಿ ನಾವು' ಕರ್ನಾಟಕ ರಾಜ್ಯೋತ್ಸವ ಅಭಿಯಾನದಲ್ಲಿ ಏಕಕಾಲದಲ್ಲಿ ಕನ್ನಡದ ಶ್ರೇಷ್ಠತೆ ಸಾರುವ ಗೀತೆಗಳನ್ನು ಮನಮೋಹಕವಾಗಿ ಪ್ರಸ್ತುತಪಡಿಸಲಾಯಿತು.

ನಾಡು- ನುಡಿಯ ಅಭಿಮಾನವನ್ನು ಬಡಿದೆಬ್ಬಿಸಿದ ಗೀತೆಗಳಿಗೆ ವಿದ್ಯಾರ್ಥಿ ಸಮೂಹ ಕುಣಿದು ಕುಪ್ಪಳಿಸಿತು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕನ್ನಡದ ಸಂಕಲ್ಪ ಬೋಧನೆ ಮಾಡಿದರು.

ಕರ್ನಾಟಕ ಕಲಾ ಕಾಲೇಜು ಮುಂಭಾಗದಲ್ಲಿ ನೆರೆದಿದ್ದ ಸಾವಿರಾರು ವಿದ್ಯಾರ್ಥಿಗಳು ಕನ್ನಡದ ಹಬ್ಬದಲ್ಲಿ ಉತ್ಸಾಹದಿಂದ ಭಾಗವಹಿಸಿದ್ದರು.

ಹಿರಿಯ ಸಾಹಿತಿ ಪ್ರೊ. ಮಾಲತಿ ಪಟ್ಟಣಶೆಟ್ಟಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಉಪ ವಿಭಾಗಾಧಿಕಾರಿ ಡಾ. ಗೋಪಾಲಕೃಷ್ಣ, ಜಿ.ಪಂ. ಉಪ ಕಾರ್ಯದರ್ಶಿ ರೇಖಾ ಡೊಳ್ಳಿನವರ, ಕರ್ನಾಟಕ ಕಲಾ ಕಾಲೇಜಿನ ಪ್ರಾಚಾರ್ಯ ಡಾ. ಡಿ.ಬಿ. ಕರಡೋಣಿ, ಕರ್ನಾಟಕ ವಿಜ್ಞಾನ ಕಾಲೇಜಿನ ಪ್ರಾಚಾರ್ಯೆ ಡಾ. ಎ.ಎಸ್. ಬೆಲ್ಲದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಮಂಜುಳಾ ಯಲಿಗಾರ, ಜಿಲ್ಲಾ ವಾರ್ತಾಧಿಕಾರಿ ಮಂಜುನಾಥ ಡೊಳ್ಳಿನ, ಜಿಲ್ಲಾ ಕನ್ನಡ ಜಾಗೃತಿ ಸಮಿತಿ ಸದಸ್ಯ ಕೆ.ಎಚ್. ನಾಯಕ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಸ್.ಎಫ್. ಸಿದ್ಧನಗೌಡರ, ಕಲಾವಿದರಾದ ಯಕ್ಕೇರಪ್ಪ ನಡುವಿನಮನಿ, ಮಲ್ಲಪ್ಪ ಹೊಂಗಲ್, ವಿದ್ಯಾರ್ಥಿಗಳು, ಸಂಘ- ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

**ಕರ್ನಾಟಕ ವಿದ್ಯಾವರ್ಧಕ ಸಂಘದ ಆವರಣ:** ಸಾಮೂಹಿಕ ಕನ್ನಡ ಗೀತ ಗಾಯನ ಕಾರ್ಯಕ್ರಮವು ನಗರದ ಕರ್ನಾಟಕ ವಿದ್ಯಾವರ್ಧಕ ಸಂಘದ ಆವರಣದಲ್ಲಿ ಉತ್ಸಾಹದಿಂದ ಜರುಗಿತು. ತಹಸೀಲ್ದಾರ್ ಡಾ. ಸಂತೋಷ ಬಿರಾದಾರ ಸಾರ್ವಜನಿಕರಿಗೆ ಕನ್ನಡ ಸಂಕಲ್ಪದ ಪ್ರತಿಜ್ಞೆ ಬೋಧಿಸಿದರು. ಸಂಘದ ಖಜಾಂಚಿ ಸತೀಶ ತುರಮರಿ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಪ್ರಕಾಶ ಉಡಕೇರಿ ವಂದಿಸಿದರು. ಸಂಯೋಜಕಿ ವಿಶ್ವೇಶ್ವರಿ ಹಿರೇಮಠ ನಿರೂಪಿಸಿದರು. ಗೀತಗಾಯನ ಕಾರ್ಯಕ್ರಮದ ಹಿನ್ನೆಲೆಯಾಗಿ ತಬಲಾ ವಾದಕ ಅನಿಲ್ ಮೇತ್ರಿ ನೇತೃತ್ವದ ತಂಡ ಸಂಗೀತ ಸಂಯೋಜನೆ ನೀಡಿತು. ಮಾಜಿ ಶಾಸಕ ಚಂದ್ರಕಾಂತ ಬೆಲ್ಲದ, ಹಿರಿಯರಾದ ಬಿ.ಕೆ. ಹೊಂಗಲ್, ನಿಂಗಣ್ಣ ಕುಂಟಿ, ಶಿವಣ್ಣ ಬೆಲ್ಲದ, ಸದಾನಂದ ಶಿವಳ್ಳಿ, ಡಾ. ಧನವಂತ ಹಾಜವಗೋಳ, ಲಕ್ಷ್ಮಣ ಬಕ್ಕಾಯಿ, ಡಾ. ಹೇಮಾ ಪಟ್ಟಣಶೆಟ್ಟಿ, ಬಸಲಿಂಗಯ್ಯ ಹಿರೇಮಠ, ಪಶು ವೈದ್ಯಕೀಯ ಇಲಾಖೆಯ ಉಪ ನಿರ್ದೇಶಕ ಉಮೇಶ ಕೊಂಡಿ, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಕಾಶಿನಾಥ ಭದ್ರಣ್ಣವರ, ಧಾರವಾಡ ಎಪಿಎಂಸಿ ಉಪ ನಿರ್ದೇಶಕ ಪ್ರಭಾಕರ ಅಂಗಡಿ, ಪಿಆರ್ಇಡಿ ಕಾರ್ಯಪಾಲಕ ಇಂಜಿನಿಯರ್ ರಾಜಕುಮಾರ, ಕಾಲೇಜ್ ವಿದ್ಯಾರ್ಥಿಗಳು, ವಿವಿಧ ಇಲಾಖೆ ಸಿಬ್ಬಂದಿ ಸಾಮೂಹಿಕ ಗೀತಗಾಯನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

Hubli Edition
Oct 29, 2021 Page No. 5
Powered by : eReleGo.com